**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ. 2126/2021**

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ತಿಪ್ಪೇಸ್ವಾಮಿ | ಸಿ.ಡಬ್ಲ್ಯೂ–11 |
| ತಂದೆಯ ಹೆಸರು | : | ತಿಪ್ಪಯ್ಯ | ಪಿ.ಡಬ್ಲ್ಯೂ–05 |
| ವಯಸ್ಸು | : | 38 ವರ್ಷ | |
| ಉದ್ಯೋಗ | : | ಹಮಾಲಿ ಕೆಲಸ | |
| ವಾಸಸ್ಥಳ | : | ವರವು ಗ್ರಾಮ | ದಿಃ 14–08–2025. |

**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**

ಸಾಕ್ಷಿಗೆ ನಿಪಿ.12 ಅನ್ನು ತೋರಿಸಲಾಗಿ ಅರಲ್ಲಿರುವ ತನ್ನ ಸಹಿಯನ್ನ ನೋಡಿ ಗುರುತಿಸಿದ ಮೇರೆಗೆ ಸಾಕ್ಷಿಯ ಸಹಿಯನ್ನು ನಿಪಿ.12(ಬಿ) ಅಂತ ಗುರುತಿಸಲಾಯಿತು. ಈಗ 5 ವರ್ಷಗಳ ಹಿಂದೆ ಚಳ್ಳಕೆರೆ ತಾಲ್ಲೂಕು ಕಚೇರಿಯ ಹತ್ತಿರ ನಿಪಿ.12 ಕ್ಕೆ ಸಹಿ ಮಾಡಿರುತ್ತೇನೆ. ಯಾವ ವಿಚಾರಕ್ಕೆ ಸಹಿ ಪಡೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಮತ್ತು ಯಾವುದೇ ವಾಹನವನ್ನು ಜಪ್ತು ಪಡಿಸಿಕೊಂಡಿರುವುದಿಲ್ಲ. ನನ್ನನ್ನು ಹೊರತು ಪಡಿಸಿ ನಿಪಿ.12 ಕ್ಕೆ ಬೇರೆ ಯಾರು ಸಹಿ ಮಾಡಿರುವುದಿಲ್ಲ. ನಿಪಿ.12 ಕ್ಕೆ ಬೆಳಿಗ್ಗೆ 12–00 ಗಂಟೆಗೆ ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ನಾಲ್ಕು ಭಾವಚಿತ್ರಗಳನ್ನು ತೋರಿಸಲಾಗಿ ಅವರಣದಲ್ಲಿರುವ ವಾಹನಗಳನ್ನು ನೋಡಿ ಗುರುತಿಸಿರುವುದಿಲ್ಲ.

**(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ**

ದಿಃ 24.12.2019 ರಂದು ಚಳ್ಳಕೆರೆ ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತ ಪಡಿಸಿದ ಕೆಎ–16 ಇಸಿ–8182 ನೇ ಮೋಟಾರ್ ಸೈಕಲ್ಲನ್ನು ನನ್ನ ಹಾಗೂ ಚಾಸಾ–10 ರವರ ಸಮಕ್ಷಮ ಬೆಳಿಗ್ಗೆ 10.30 ರಿಂದ 11.15 ರವರೆಗೆ ನಿಪಿ.12 ರಂತೆ ಪಂಚನಾಮೆ ಕ್ರಮ ಜರುಗಿಸಿ ವಾಹನವನ್ನು

ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಕೆಎ-16 ಇಸಿ-8182 ನೇ ವಾಹನವನ್ನು ಚಾಸಾ-21 ರಮರ ಪತ್ತೆ ಮಾಡಿ ತಂದು ಠಾಣಾ ಆವರಣದಲ್ಲಿ ನಿಲ್ಲಿಸಿದ್ದರು ಎಂದರೆ ಸರಿಯಲ್ಲ. ಪಂಚನಾಮೆ ಸಮಯದಲ್ಲಿ 4 ಭಾವಚಿತ್ರಗಳನ್ನು ತೆಗೆಯಲಾಗಿರುತ್ತದೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಶ್ರೀ ಸಿ.ವಿ. ಆರೋಪಿಯ ಪರ ವಕೀಲರಿಂದಃ</u>

ಆರೋಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ